# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 694 (761) |
| ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ(ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 13-03-2025 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ಲೋಕಸೇವಾ ಆಯೋಗವು ಇತ್ತೀಚೆಗೆ ನಡೆಸಿದ ಗೆಜೆಟೆಡ್ ಪ್ರೋಬೇಷನರಿ/ಇತರೆ ಪರೀಕ್ಷೆಗಳು ಗೊಂದಲಕ್ಕೆ ಈಡಾಗುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮ ಮತ್ತು ಪ್ರಸಕ್ತ ವರ್ಷದಲ್ಲಿ ಎಷ್ಟು ಅವಾಂತರಗಳು ಆಯೋಗದಲ್ಲಿ ನೆಡೆದಿದೆ; | ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ:27-08-2024ರಂದು ನಡೆಸಿದ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಪರೀಕ್ಷೆ ಹಾಗೂ ದಿನಾಂಕ:29-12-2024ರಂದು ಗೆಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಮರು ಪರೀಕ್ಷೆಗಳಲ್ಲಿ, ಕನ್ನಡ ಪ್ರಶ್ನೆ ಪತ್ರಿಕೆಯಲ್ಲಿ ಭಾಷಾಂತರ ಲೋಪದೋಷಗಳ ಬಗ್ಗೆ ಪರೀಕ್ಷಾರ್ಥಿಗಳಿಗೆ ಗೊಂದಲ ಉಂಟಾಗಿರುವುದಾಗಿ ಅಭ್ಯರ್ಥಿಗಳು ಹಾಗೂ ಸಂಘ/ ಸಂಸ್ಥೆಗಳು ಮನವಿ ಸಲ್ಲಿಸಿರುತ್ತಾರೆ.<br><br>ಈ ಸಂಬಂಧ ಅಭ್ಯರ್ಥಿಗಳಿಂದ ಸ್ವೀಕೃತವಾದ ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಉತ್ತಮ ಕನ್ನಡ ಭಾಷಾ ಜ್ಞಾನವನ್ನು ಹೊಂದಿರುವ ಹಾಗೂ ಆಯಾ ವಿಷಯಗಳಲ್ಲಿ ಪರಿಣತಿ ಹೊಂದಿರುವಂತಹ ಮೂವರು ವಿಷಯ ತಜ್ಞರುಗಳ ಸಮಿತಿಗಳನ್ನು ರಚಿಸಿ ಅಭಿಪ್ರಾಯವನ್ನು ಪಡೆಯಲಾಗಿದ್ದು, ಭಾಷಾಂತರ ಮತ್ತು ತಾಂತ್ರಿಕ ದೋಷದಿಂದಾಗಿ ಕೆಲವು ಪ್ರಶ್ನೆಗಳಿಗೆ ಕೃಪಾಂಕ ಹಾಗೂ ಕೆಲವು ಪ್ರಶ್ನೆಯ ಕೀ-ಉತ್ತರವನ್ನು ಪರಿಷ್ಕರಿಸಬೇಕೆಂದು, ಕೆಲವು ಪ್ರಶ್ನೆಗಳಲ್ಲಿ ವ್ಯತ್ಯಾಸವಿದ್ದರೂ ಸಹ ಪ್ರಶ್ನೆಯನ್ನು ಅರ್ಥೈಸಿಕೊಳ್ಳಬಹುದೆಂದು, ಕೆಲವು ಪ್ರಶ್ನೆಗಳಲ್ಲಿ ಕಾಗುಣಿತಾಕ್ಷರಗಳ ಮುದ್ರಣ ದೋಷವಾಗಿರುವುದಾಗಿಯೂ ಹಾಗೂ ಇನ್ನುಳಿದ ಪ್ರಶ್ನೆಗಳಲ್ಲಿ ಯಾವುದೇ ಭಾಷಾಂತರ ವ್ಯತ್ಯಾಸವಿರುವುದಿಲ್ಲವೆಂದು ಅಭಿಪ್ರಾಯ ನೀಡಿರುತ್ತಾರೆ.<br><br>ದಿನಾಂಕ:23-01-2025ರಂದು ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿದಂತೆ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ಲೋಕಸೇವಾ ಆಯೋಗಗಳ ಸಹಯೋಗದೊಂದಿಗೆ ಒಂದು ಕನ್ನಡ ಭಾಷಾ ತಜ್ಞರ ಪೂಲ್‌ನ್ನು ರಚಿಸಲು ಪರಿಶೀಲಿಸಲಾಗುತ್ತಿದೆ. |

| | | |
|---|---|---|
| (ಆ) | ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷೆಯ ಯಡವಟ್ಟಿನಿಂದ ವಯೋಮಿತಿ ಅಂಚಿನಲ್ಲಿರುವ ರಾಜ್ಯದ ಉದ್ಯೋಗಾಕಾಂಕ್ಷಿಗಳು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಇದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; ವಯೋಮಿತಿ ಸಡಿಲಿಕೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು) | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| (ಇ) | ಕಳೆದ 01 ವರ್ಷಗಳಲ್ಲಿ ಸದರಿ ಆಯೋಗವು ನಡೆಸುವ ಪರೀಕ್ಷೆಯಲ್ಲಿನ ನ್ಯೂನ್ಯತೆಗಳಿಗೆ ಹೊಣೆಗಾರರು ಯಾರು; ಹೊಣೆಯಾದವರ ವಿರುದ್ಧ ಯಾವ ಕ್ರಮಗಳನ್ನು ಜರುಗಿಸಲಾಗಿದೆ; ಜರುಗಿಸಿದ್ದಲ್ಲಿ ಯಾವ- ಯಾವ ಅಧಿಕಾರಿಗಳ ವಿರುದ್ಧ ಯಾವ-ಯಾವ ಕ್ರಮಗಳನ್ನು ಜರುಗಿಸಲಾಗಿದೆ; ಜರುಗಿಸದಿದ್ದಲ್ಲಿ, ಯಾವ ಕಾರಣಕ್ಕಾಗಿ ಜರುಗಿಸಿರುವುದಿಲ್ಲ; ಈ ಕುರಿತು ಸಂಪೂರ್ಣ ಮಾಹಿತಿ ಮತ್ತು ಸೂಕ್ತ ಕಾರಣದೊಂದಿಗೆ ವಿವರಿಸುವುದು; | ಆಯೋಗವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪ್ರಶ್ನೆಗಳನ್ನು ವಿಷಯ ತಜ್ಞರುಗಳಿಂದ ಪಡೆದು, ಆಂಗ್ಲ ಭಾಷೆಯಲ್ಲಿರುವಂತಹ ಪ್ರಶ್ನೆಗಳನ್ನು ಕನ್ನಡಕ್ಕೆ ಭಾಷಾಂತರಿಸಲು ಭಾಷಾಂತರಕಾರರ ಹಾಗೂ ವಿಷಯ ತಜ್ಞರುಗಳ ನೆರವನ್ನು ಪಡೆಯಲಾಗುತ್ತಿದೆ. ಪ್ರಶ್ನೆಗಳನ್ನು ಸಿದ್ಧಪಡಿಸುವಲ್ಲಿ/ ಭಾಷಾಂತರಿಸುವಲ್ಲಿ ಲೋಪವೆಸಗಿರುವ ವಿಷಯ ತಜ್ಞರುಗಳನ್ನು ಮುಂದಿನ ಪರೀಕ್ಷಾ ಗೌಪ್ಯ ಕಾರ್ಯದಿಂದ ಕೈಬಿಡಲಾಗಿರುತ್ತದೆ.<br><br>ದಿನಾಂಕ:29-12-2024ರಂದು ಗೆಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಮರು ಪರೀಕ್ಷೆಗಳಲ್ಲಿ ಭಾಷಾಂತರ ಮತ್ತು ತಾಂತ್ರಿಕ ದೋಷದಿಂದಾಗಿ 5 ಪ್ರಶ್ನೆಗಳಿಗೆ ಕೃಪಾಂಕ ಹಾಗೂ 1 ಪ್ರಶ್ನೆಯ ಕೀ-ಉತ್ತರವನ್ನು ವಿಷಯ ತಜ್ಞರುಗಳ ಅಭಿಪ್ರಾಯದ ಮೇರೆಗೆ ಪ್ರಕಟಿಸಿ, ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ. |
| (ಈ) | ಸದರಿ ಆಯೋಗದ ಸರಣಿ ಯಡವಟ್ಟಿನಿಂದಾಗಿ ವಯೋಮಿತಿ ಅಂಚಿನಲ್ಲಿರುವ ಉದ್ಯೋಗಾಕಾಂಕ್ಷಿಗಳು ಆಯೋಗದ ಮೇಲೆ ವಿಶ್ವಾಸ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ; ಸರ್ಕಾರದ ಕ್ರಮಗಳೇನು? | ಕರ್ನಾಟಕ ಲೋಕಸೇವಾ ಆಯೋಗವು ಜನವರಿ 2024 ರಿಂದ ಇಲ್ಲಿಯವರೆಗೆ 12 ಅಧಿಸೂಚನೆಗಳಲ್ಲಿ ಅಧಿಸೂಚಿಸಲಾದ ಒಟ್ಟು 1734 ಹುದ್ದೆಗಳಿಗೆ 37 ಪತ್ರಿಕೆಗಳಿಗೆ ಒಟ್ಟಾರೆ 11,40,292 ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯಾವುದೇ ಲೋಪ ದೋಷಗಳಿಲ್ಲದೆ ಸುಲಲಿತವಾಗಿ ನಡೆಸಲಾಗಿರುತ್ತದೆ. |

**ಸಂಖ್ಯೆ: ಸಿಆಸುಇ 55 ಎಸ್‌ಎಲ್‌ಎ 2025**

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**